ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 03/03/2020

# ಮಹದಾಯಿ ಸರಾಗ

ಉ.ವಾ. 3/3/20

## ಗೋವಾ ಸರ್ಕಾರದ ಅರ್ಜಿ ವಜಾ

- ಯೋಜನೆ ಜಾರಿ ತಡೆ ಹಿಡಿಯುವಂತೆ ಸುಪ್ರೀಂಗೆ ಅರ್ಜಿ ಸಲ್ಲಿಸಿದ್ದ ಗೋವಾ
- ಯೋಜನೆ ಅನುಷ್ಠಾನಕ್ಕೆ ಅಡ್ಡಿಯಾಗಿದ್ದ ಕೊನೇ ಅಡೆ ತಡೆಯೂ ನಿವಾರಣೆ

**ನವದೆಹಲಿ:** ಕಳಸಾ ಬಂಡೂರಿ ಯೋಜನೆ ಜಾರಿಗೆ ತಡೆಯಾಜ್ಞೆ ಕೋರಿ ಗೋವಾ ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ತಳ್ಳಿಹಾಕಿದೆ. ಇದರಿಂದ ಯೋಜನೆ ಜಾರಿ ಬಗ್ಗೆ ಇದ್ದ ಎಲ್ಲಾ ಅಡೆ ತಡೆಗಳೂ ನಿವಾರಣೆಯಾದಂತಾಗಿದೆ.

ಸರ್ವೋಚ್ಚ ನ್ಯಾಯಾಲಯದ ಈ ತೀರ್ಪಿನಿಂದಾಗಿ, 2018ರ ಆ. 14ರಂದು ಮಹದಾಯಿ ನೀರು ವಿವಾದ ನ್ಯಾಯಾಧಿಕರಣವು (ಎಂಡಬ್ಲ್ಯೂಡಿಟಿ) ನೀಡಿದ್ದ ಆದೇಶದಂತೆ, ಕರ್ನಾಟಕವು, ಗೋವಾದಲ್ಲಿ ಹರಿಯುವ ಮಹದಾಯಿ ನದಿಯಿಂದ 13.42 ಟಿಎಂಸಿ ನೀರನ್ನು ಕಳಸಾ-ಬಂಡೂರಿ ನಾಲೆಯ ಮೂಲಕ ಮಲಪ್ರಭಾ ನದಿಗೆ ಹರಿಸಿಕೊಳ್ಳಬಹುದಾಗಿದೆ.

**ಗೋವಾದಿಂದ ಸತತ ಅಡ್ಡಗಾಲು:** ಅಸಲಿಗೆ, 2014ರ ಏ. 17ರಂದು ಮಧ್ಯಂತರ ಆದೇಶ ನೀಡಿದ್ದ ಸರ್ವೋಚ್ಚ ನ್ಯಾಯಾಲಯ, ಮಹದಾಯಿ ನದಿಯಿಂದ 1.7 ಟಿಎಂಸಿ ನೀರನ್ನು ತನ್ನ ಕಡೆಗೆ ತಿರುಗಿಸಿಕೊಳ್ಳಲು ಕರ್ನಾಟಕಕ್ಕೆ ಅನುಮತಿ ನೀಡಿತ್ತು. ಆದರೆ, ಅದಕ್ಕೆ ಗೋವಾ ಸತತವಾಗಿ ಅಡ್ಡಗಾಲು ಹಾಕುತ್ತಾ ಬಂದಿದ್ದನ್ನು ಇಲ್ಲಿ ಸ್ಮರಿಸಬಹುದು.

ಇತ್ತೀಚೆಗೆ, ವಿರೋಧ ಪಕ್ಷಗಳ ನಾಯಕರ ಒತ್ತಾಯಕ್ಕೆ ಮಣಿದಿದ್ದ ಗೋವಾ ಸಿಎಂ ಪ್ರಮೋದ್ ಸಾವಂತ್, ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದರು.